# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 855

ಸದಸ್ಯರ ಹೆಸರು : ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ದಿನಾಂಕ : 14.07.2023

ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಗ್ರಾಮ ಪಂಚಾಯಿತಿಗಳಲ್ಲಿ ಸ್ವಂತ ಸಂಪನ್ಮೂಲ ಕ್ರೋಢೀಕರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು) | ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಗಳ ತೆರಿಗೆ, ದರ ಮತ್ತು ಫೀಜುಗಳು) ನಿಯಮಗಳು, 2021 ಅನ್ನು ರೂಪಿಸಲಾಗಿದ್ದು, ಅದರಂತೆ ಗ್ರಾಮ ಪಂಚಾಯತಿಗಳು ತೆರಿಗೆ, ದರ ಮತ್ತು ಫೀಜುಗಳನ್ನು ವಿಧಿಸಿ ಸಂಪನ್ಮೂಲ ಕ್ರೋಢೀಕರಿಸಲು ತಿಳಿಸಲಾಗಿದೆ. |
| (ಆ) | ಸದರಿ ಜಿಲ್ಲೆಗಳಲ್ಲಿ ಬರುವ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ತೆರಿಗೆಗೆ ಒಳಪಡದ ಕಟ್ಟಡಗಳ ಸಂಖ್ಯೆ ಎಷ್ಟು; (ವಿವರ ನೀಡುವುದು) | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ತೆರಿಗೆಗೆ ಒಳಪಡದ ಕಟ್ಟಡಗಳ ವಿವರ ಈ ಕೆಳಕಂಡಂತಿದೆ.<br><br>**ಜಿಲ್ಲೆ** \| **ವಸತಿಯೇತರ** \| **ವಾಣಿಜ್ಯ** \| **ಕೈಗಾರಿಕೆ**<br>ಕಲಬುರಗಿ \| 27130 \| 2545 \| 12<br>ಯಾದಗಿರಿ \| 4129 \| 1892 \| 399 |
| (ಇ) | ತೆರಿಗೆ ವ್ಯಾಪ್ತಿಗೆ ಒಳಪಡದ ಕಟ್ಟಡಗಳನ್ನು ತೆರಿಗೆ ವ್ಯಾಪ್ತಿಗೆ ತರುವ ಮೂಲಕ ಸಂಪನ್ಮೂಲ ಕ್ರೋಢೀಕರಿಸಿ ಗ್ರಾಮ ಪಂಚಾಯಿತಿಗಳ ಸರ್ವಾಂಗೀಣ ಅಭಿವೃದ್ಧಿ ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು) | ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಗಳ ತೆರಿಗೆ, ದರ ಮತ್ತು ಫೀಜುಗಳು) ನಿಯಮಗಳು, 2021 ರ ನಿಯಮ, 17, 18 ಮತ್ತು 19 ರಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 199 ಕ್ಕನುಗುಣವಾಗಿ ಆಸ್ತಿಗಳನ್ನು ತೆರಿಗೆ ವ್ಯಾಪ್ತಿಗೆ ಒಳಪಡಿಸಲು ತೆರಿಗೆಗೆ ಗುರಿಯಾಗತಕ್ಕ ಎಲ್ಲಾ ಭೂಮಿ, ಕಟ್ಟಡಗಳ ಸಮಗ್ರ ಸಮೀಕ್ಷೆಯನ್ನು ನಡೆಸಿ, ಆಸ್ತಿ ಮತ್ತು ಆಸ್ತಿ ತೆರಿಗೆ ನಮೂನೆಯಲ್ಲಿ ಆಸ್ತಿಯ ವಿವರಗಳನ್ನು ದಾಖಲಿಸಿ, ತೆರಿಗೆ ಲೆಕ್ಕಚಾರ ಮಾಡಿ ನಮೂನೆ-9 ಎ ವಹಿಯಲ್ಲಿ ನಮೂದಿಸಲು ತಿಳಿಸಲಾಗಿದೆ.<br><br>ರಾಜ್ಯದ ಎಲ್ಲಾ ಜಿಲ್ಲೆಗಳ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಕೃಷಿ ತೆರಿಗೆ ನಿರ್ಧರಣೆಗೆ ಒಳಪಟ್ಟಿರದ ಎಲ್ಲಾ ಭೂಮಿ ಮತ್ತು ಕಟ್ಟಡಗಳ ಮ್ಯಾನುಯಲ್ ಸಮೀಕ್ಷೆಯನ್ನು ನಡೆಸಿ ತೆರಿಗೆ ವ್ಯಾಪ್ತಿಗೆ ಒಳಪಡಿಸಲು ತಿಳಿಸಲಾಗಿದೆ.<br><br>ಪ್ರಸ್ತುತ ರಾಜ್ಯದ ಪ್ರತಿಯೊಂದು ಗ್ರಾಮ ಪಂಚಾಯತಿಗಳಲ್ಲಿ ಮ್ಯಾನ್ಯೂಯಲ್ ಸಮೀಕ್ಷೆಯನ್ನು ಪೂರ್ಣಗೊಳಿಸಿ, ಸಮೀಕ್ಷೆಯ ನಮೂನೆಯಲ್ಲಿ ಆಸ್ತಿ ವಿವರಗಳನ್ನು ನಮೂದಿಸಿ, ಅಗತ್ಯ ದಾಖಲೆಗಳನ್ನು ಸಂಗ್ರಹಿಸಿ, ನಮೂನೆ-9ಎ, ನಮೂನೆ-9, ನಮೂನೆ-11ಎ ಮತ್ತು ನಮೂನೆ-11ಬಿ |

| | | |
|---|---|---|
| | | ವಹಿಗಳಲ್ಲಿ ತ್ವರಿತವಾಗಿ ದಾಖಲಿಸಿ, ದಿನಾಂಕ:31-07-2023 ರೊಳಗೆ ಇಲಾಖೆಯ ಪಂಚತಂತ್ರ 2.0 ತಂತ್ರಾಂಶದಲ್ಲಿ ಆರೋಹಿಸಿ, ಕಡ್ಡಾಯವಾಗಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಎಲ್ಲಾ ಕೃಷಿ ತೆರಿಗೆ ನಿರ್ಧರಣೆಗೆ ಒಳಪಟ್ಟಿರದ ಎಲ್ಲಾ ಭೂಮಿ ಮತ್ತು ಕಟ್ಟಡಗಳಿಗೆ ಪಂಚತಂತ್ರ 2.0 ತಂತ್ರಾಂಶದ ಮೂಲಕ ತೆರಿಗೆ ವಿಧಿಸಿ, ತೆರಿಗೆ ವಸೂಲಿ ಮಾಡಲು ಕ್ರಮ ಕೈಗೊಳ್ಳಲು ಎಲ್ಲಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಚಿಸಲಾಗಿದೆ.<br><br>ರಾಜ್ಯದ ಗ್ರಾಮ ಪಂಚಾಯತಿಗಳಲ್ಲಿ ಪಂಚತಂತ್ರ 2.0 ತಂತ್ರಾಂಶ ಅನುಷ್ಠಾನಗೊಳಿಸಲಾಗಿದ್ದು, ಸಂಗ್ರಹಣೆ ಮಾಡಲಾಗುವ ತೆರಿಗೆ, ಫೀಜು ಮತ್ತು ದರಗಳ ವಿವರಗಳನ್ನು ರಶೀದಿ ವೋಚರ್‌ಗಳನ್ನು ಸೃಜಿಸಿ ಅಳವಡಿಸಲು ಗ್ರಾಮ ಪಂಚಾಯತಿಗಳಿಗೆ ನಿರ್ದೇಶನ ನೀಡಲಾಗಿದೆ.<br><br>ಆಸ್ತಿಯ ಮಾಲೀಕರು ಕ್ಯಾಶ್, ಯು.ಪಿ.ಐ., ಪಿ.ಓ.ಎಸ್. ಡೆಬಿಟ್ ಕಾರ್ಡ್, ಕ್ರೆಡಿಟ್ ಕಾರ್ಡ್ , ಚೆಕ್ , ಡಿ.ಡಿ, ಇಂಟರ್‌ನೆಟ್ ಬ್ಯಾಂಕಿಗ್, ಫೋನ್ ಪೇ, ಗೂಗಲ್ ಪೇ, ಪೇಟಿಯಮ್, ಅಮೇಜನ್ ಪೇ, ಮೂಲಕ ತೆರಿಗೆ ಪಾವತಿಸಲು ಅವಕಾಶ ಕಲ್ಪಿಸಲಾಗಿದೆ. |

ಸಂಖ್ಯೆ:RDPR 331 GPA 2023

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.